ಆರ್ಥಿಕ ಸಂಸ್ಥೆಗಳಿಂದ ಸಾಲ–ರೂ 261 63 ಲಕ್ಷಗಳು ಸ್ಥಳೀಯ ಸಂಸ್ಥೆಯ ವಂತಿಕೆ–ರೂ 104 65 ಲಕ್ಷಗಳು ಈವರೆಗೆ ರೂ 522 27 ಲಕ್ಷಗಳು ಬಿಡುಗಡೆಯಾಗಿದೆ

ಇ) ಆಂತರಿಕ ಕೊಳವೆ ಮಾರ್ಗಗಳು, ಔಟ್ ಫಾಲ್ ಸೀವರ್, ವೆಟ್ ವೆಲ್ ನಿರ್ಮಾಣ ಮುಂತಾದ ಕಾಮಗಾರಿಗಳಿಗೆ 18 ತಿಂಗಳ ಕಾಲಾವಕಾಶ ನೀಡಲಾಗಿದೆ

ಕೊಳಚೆ ನೀರು ಶುದ್ಧೀಕರಣ ಘಟಕ ನಿರ್ಮಿಸುವ ಕಾಮಗಾರಿಗೆ 8 ತಿಂಗಳ ಕಾಲಾವಕಾಶ ನೀಡಲಾಗಿದೆ

ಈ) ಕಾಮಗಾರಿಗಳಿಗೆ ಒಟ್ಟು 12 ಎಕರೆ 11 ಗುಂಟೆ ಜಮೀನು ಬನ್ನೂರು ಪುರಸಭೆಯವರು ಮಂಡಳಿಗೆ 4 ಗುಂಟೆ ಜಮೀನು ಮಾತ್ರ ಹಸ್ತಾಂತರಿಸಿರುತ್ತಾರೆ ಈ ಹಸ್ತಾಂತರಿಸಿದ ಜಾಗದಲ್ಲಿ ಒಂದು ಶುದ್ಧೀಕರಣ ಘಟಕವನ್ನು ನಿರ್ಮಾಣ ಮಾಡಲಾಗಿದೆ ಇನ್ನುಳಿದ 6 ಎಕರೆ 7 ಗುಂಟೆ ಜಮೀನನ್ನು ಹಸ್ತಾಂತರಿಸಿದ ಕೂಡಲೇ ಉಳಿದ ಕಾಮಗಾರಿಗಳನ್ನು ಕೈಗೆತ್ತಿಕೊಂಡು ಪೂರ್ಣಗೊಳಿಸಲಾಗುವುದು

ಉ) ಮಳೆಗಾಲದಲ್ಲಿ ಕೊಳಚೆ ನೀರು ಮತ್ತು ಮಳೆ ನೀರು ಸೇರಿ ಉಕ್ಕಿ ಹರಿದು ರಸ್ತೆಗೆ ಚರಂಡಿ ನೀರು ಬಂದಿರುತ್ತದೆ ಇದನ್ನು ಸರಿಪಡಿಸಲು ಪೂರ್ಣ ಕ್ರಮವನ್ನು ಬನ್ನೂರು ಪಟ್ಟಣ ಪಂಚಾಯತ್ ತೆಗೆದುಕೊಳ್ಳುತ್ತಿದೆ

ಊ) ಉದ್ಭವಿಸುವುದಿಲ್ಲ

450 (506) **ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು)** : ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರ ಮತಕ್ಷೇತ್ರದ ಗ್ರಾಮೀಣ ರಸ್ತೆಯಾದ ನೇಗಿಹಾಳ–ಬೇವಿನಕೊಪ್ಪ ರಸ್ತೆಯನ್ನು ಜಿಲ್ಲೆ ಮುಖ್ಯ ರಸ್ತೆಯನ್ನಾಗಿ ಮೇಲ್ದರ್ಜೆಗೇರಿಸಿ, ನೀರಾವರಿ ಇಲಾಖೆಯಿಂದ ಲೋಕೋಪಯೋಗಿ ಇಲಾಖೆಗೆ ಹಸ್ತಾಂತರಿಸಿಕೊಳ್ಳುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ,

ಆ) ಹಾಗಿದ್ದಲ್ಲಿ ಯಾವಾಗ ಹಸ್ತಾಂತರಿಸಿಕೊಳ್ಳಲಾಗುವುದು

ಇ) ನೇಗಿಹಾಳ–ಬೇವಿನಕೊಪ್ಪ ರಸ್ತೆಯ ಅಭಿವೃದ್ಧಿಗೆ ಎಷ್ಟು ಹಣ ಬಿಡುಗಡೆ ಮಾಡಲಾಗುವುದು?

ಶ್ರೀ ಹೆಚ್ ಡಿ ರೇವಣ್ಣ (ಲೋಕೋಪಯೋಗಿ ಮತ್ತು ಇಂಧನ ಸಚಿವರು)

ಅ) ಹೌದು

ಆ) ರಸ್ತೆಯನ್ನು ಮೇಲ್ದರ್ಜೆಗೇರಿಸಿದ ನಂತರ ಹಸ್ತಾಂತರಿಸಿ ಕೊಳ್ಳಲಾಗುವುದು

ಇ) ಮೇಲ್ದರ್ಜೇಗೇರಿಸುವ ವಿಷಯ ಸರ್ಕಾರದ ಪರಿಶೀಲನೆ ಯಲ್ಲಿರುವುದರಿಂದ ಈ ಪ್ರಶ್ನೆ ಉದ್ಭವಿಸುವುದಿಲ್ಲ

451 (507) ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು) ಮಾನ್ಯ ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ರಚನೆ ಕಾರ್ಯವು ವಿಳಂಬ ವಾಗುತ್ತಿರುವುದು ಸರಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ ಶೀಘ್ರ ರಚನೆಗಾಗಿ ಯಾವ ಕ್ರಮ ಕೈಗೊಳ್ಳಲಾಗುವುದು?

ಶ್ರೀ ಶ್ರೀರಾಮುಲು (ಪ್ರವಾಸೋದ್ಯಮ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು)

ಅ) ಹೌದು

ಆ) ಕಿತ್ತೂರು ಅಭಿವೃದ್ಧಿ ಪ್ರಾಧಿಕಾರದ ರಚನೆಯ ಪ್ರಸ್ತಾವನೆಯು ಸರ್ಕಾರದ ಪರಿಶೀಲನೆಯಲ್ಲಿದೆ

452 (508) ಶ್ರೀ ಸುರೇಶ್ ಎಸ್ ಮಾರಿಹಾಳ (ಕಿತ್ತೂರು) ಮಾನ್ಯ ಲೋಕೋಪಯೋಗಿ ಮತ್ತು ಇಂಧನ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳಗಾವಿ ಜಿಲ್ಲೆಯಲ್ಲಿ ಎಷ್ಟು ವಿದ್ಯುತ್ ಸ್ವೀಕರಣ ಕೇಂದ್ರವನ್ನು ಸ್ಥಾಪಿಸಲು ಸರ್ಕಾರ ನಿರ್ಧರಿಸಿದೆ,

ಆ) ವಿದ್ಯುತ್ ಸ್ವೀಕರಣ ಕೇಂದ್ರ ಸ್ಥಾಪಿಸಲು ಜಮೀನುಗಳನ್ನು ಖರೀದಿ ಮಾಡುವ ಪ್ರಕ್ರಿಯೆ ವಿಳಂಬವಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಇ) ಹಾಗಿದ್ದಲ್ಲಿ ತ್ವರಿತವಾಗಿ ಜಮೀನು ಖರೀದಿಸಲು ಯಾವ ಕ್ರಮ ಕೈಗೊಳ್ಳಲಾಗುವುದು?